JULY 13, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಮಹಿಳೆಯರ ಸಬಲೀಕರಣಕ್ಕಾಗಿ,** ರಾಜ್ಯ ಸರ್ಕಾರ ಗೃಹಲಕ್ಷ್ಮೀ, ಶಕ್ತಿ ಯೋಜನೆ ಸೇರಿದಂತೆ, ಹಲವು ಯೋಜನೆಗಳನ್ನು ರೂಪಿಸಿ, ಜಾರಿ ಗೊಳಿಸಿದೆ. ಸಮಾಜಕ್ಕೆ ಹಾಗೂ ಮಹಿಳಾ ಕುಲಕ್ಕೆ ಶಕ್ತಿ ಬಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ, ರಾಣಿ ಅಹಲ್ಯಾಬಾಯಿ ಹೋಳ್ಕರ್ ಅವರ 300ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಮಾತನಾಡಿದರು. ಜಾತ್ಯತೀತ ಮನೋಭಾವ ಹೊಂದಿದ್ದ, ಅಹಲ್ಯಾಬಾಯಿ ಆಗಲೇ ಅಂತರ್ಜಾತಿ ವಿವಾಹ ಮಾಡಿಸಿದ್ದರು. ರಾಜ್ಯ ಅಹಲ್ಯಾಬಾಯಿ ಹೋಳ್ಕರ್ ಮಹಿಳಾ ಸಂಘ, ಇದಕ್ಕಾಗಿ ಶ್ರಮಿಸಿದ ಯಲ್ಲಮ್ಮ ಹಾಗೂ ತಂಡ, ಅಭಿನಂದನಾರ್ಹ ಎಂದರು.

<><><>

**ದೇಶದಲ್ಲೇ ಪ್ರಥಮ ಬಾರಿಗೆ** ಕರ್ನಾಟಕ ರಾಜ್ಯ ಸರ್ಕಾರ, ಇ–ಕಾಮರ್ಸ್ ಫ್ಲಾಟ್ ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರು, ಸಿನಿಮಾ ಮತ್ತು ಸಾಂಸ್ಕೃತಿಕ ಕ್ಷೇತ್ರದ ಕಲಾ ಕಾರ್ಮಿಕರು ಹಾಗೂ ಮನೆಗೆಲಸದಲ್ಲಿ ತೊಡಗಿರುವ ಗೃಹ ಕಾರ್ಮಿಕರಿಗೆ, ಸಾಮಾಜಿಕ ಭದ್ರತೆ ಒದಗಿಸಲು ಪ್ರತ್ಯೇಕ ಅಧಿನಿಯಮಗಳನ್ನು ರೂಪಿಸಿದ್ದು, ಮುಂದಿನ ದಿನಗಳಲ್ಲಿ ಸದನದ ಅನುಮೋದನೆ ಪಡೆದು, ಕಾಯ್ದೆ ಮಂಡಿಸಿ, ಜಾರಿಗೆ ತರಲಾಗುವುದು ಎಂದು ಕಾರ್ಮಿಕ ಖಾತೆ ಸಚಿವ ಸಂತೋ ್ ಲಾಡ್ ಹೇಳಿದ್ದಾರೆ. ದಾವಣಗೆರೆಯಲ್ಲಿ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

**ಪ್ರಸಕ್ತ ಮುಂಗಾರು ಹಂಗಾಮಿಗೆ,** ಕರ್ನಾಟಕ ರೈತ ಸುರಕ್ಷಾ, ಪ್ರಧಾನಮಂತ್ರಿ ಬೆಳೆ ವಿಮೆ ಯೋಜನೆಯನ್ನು, ಅನುಷ್ಠಾನ ಗೊಳಿಸಲಾಗಿದೆ. ವಿಜಯಪುರ ಜಿಲ್ಲೆ, ಕೃಷಿ ಇಲಾಖೆಯ, ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ, ಬೆಳೆ ವಿಮೆ ಯೋಜನೆ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

**ಶಿವನಗೌಡ ಪಾಟೀಲ ಧ್ವನಿ 35 ಸೆಕೆಂದುಗಳು**

<><><>

**ಕೇಂದ್ರ ಪುರಸ್ಕೃತ ಮತ್ಸ್ಯ ಸಂಪದಾ** ಯೋಜನೆಯಡಿ, 2024–25 ನೇ ಸಾಲಿಗೆ ಸಹಾಯಧನ ಸೌಲಭ್ಯಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಶರಣ ಬಸವ ತಿಳಿಸಿದ್ದಾರೆ.

<><><>

**ರಾಜ್ಯಾದ್ಯಂತ 10 ಪಾಲಿಕೆಗಳ, 25 ಸಾವಿರಕ್ಕೂ ಹೆಚ್ಚು** ಸಿಬ್ಬಂದಿ, ಕಳೆದ 5 ದಿನಗಳಿಂದ ಮು ್ಕರ ಹೂಡಿದ್ದು, ಜನ ಸಾಮಾನ್ಯರಿಗೆ ತುಂಬ ತೊಂದರೆಯಾಗಿದೆ; ಕೂಡಲೇ ಸರ್ಕಾರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು ಎಂದು, ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ ಒತ್ತಾಯಿಸಿದ್ದಾರೆ. ಎಕ್ಸ್ ಮಾಧ್ಯಮದಲ್ಲಿ ಪ್ರತಿಕ್ರಿಯಿಸಿ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸೇರಿದಂತೆ, ಎಲ್ಲ 10 ಪಾಲಿಕೆಗಳಲ್ಲಿ ಸೇವೆಗಳು ಸ್ಥಗಿತಗೊಂಡಿವೆ. 7ನೇ ವೇತನ ಆಯೋಗದ ಸೌಲಭ್ಯ, ಜ್ಯೋತಿ ಸಂಜೀವಿನಿ ಯೋಜನೆ ಅನುಷ್ಠಾನಕ್ಕೆ, ಪಾಲಿಕೆ ಸಿಬ್ಬಂದಿ ಆಗ್ರಹಿಸುತ್ತಿದ್ದಾರೆ. ಸಾಮೂಹಿಕ ರಜೆ ಹಾಕಿ, ಪ್ರತಿಭಟನೆಗೆ ಇಳಿದಿದ್ದಾರೆ, ಎಂದು ತಿಳಿಸಿದ್ದಾರೆ.

<><><>

**ರಾಜ್ಯ ರಸ್ತೆ ಸಾರಿಗೆ ನಿಗಮದ, ಮೈಸೂರು ನಗರ** ವಿಭಾಗ, GIZ ಇಂಡಿಯಾ ವತಿಯಿಂದ, “ದೃಷ್ಟಿ ವಿಶೇಷಚೇತನ”ರ ಅನುಕೂಲಕ್ಕಾಗಿ, ವಿಶೇ ’ ಉಪಕರಣ ಅಳವಡಿಸಿದ ಬಸ್ಸುಗಳನ್ನು, ಸಿದ್ಧಪಡಿಸಿದೆ. ಮೈಸೂರು ನಗರ ಬಸ್ ನಿಲ್ದಾಣದಲ್ಲಿ, ನಾಳೆ ಮಧ್ಯಾಹ್ನ 1.30ಕ್ಕೆ, ಸಾರಿಗೆ ಖಾತೆ ಸಚಿವ ರಾಮಲಿಂಗಾ ರೆಡ್ಡಿ ಅವರು, ನೂತನ ಬಸ್‌ಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ.

<><><>

**ಹಿರಿಯ ಪತ್ರಕರ್ತ**, ಪತ್ರಿಕಾ ಸಂಪಾದಕ ಕೆ.ಬಿ ಗಣಪತಿ ಅವರು ಇಂದು ಮೈಸೂರಿನಲ್ಲಿ ಹೃದಯಾಘಾತಕ್ಕೊಳಗಾಗಿ ನಿಧನರಾದರು. ಅವರಿಗೆ 86 ವರ್ಷ ವಯಸ್ಸಾಗಿತ್ತು. ಭಾರತೀಯ ವಿದ್ಯಾಭವನದ ಅಧ್ಯಕ್ಷ ಹಾಗೂ ನಿರ್ದೇಶಕರಾಗಿ ಅವರು ಸೇವೆ ಸಲ್ಲಿಸಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಎಕ್ಸ್ ಖಾತೆ ಮೂಲಕ ಕೆ.ಬಿ ಗಣಪತಿ ಅವರ ನಿಧನಕ್ಕೆ ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ.

<><><>

**‘ಜನರೊಂದಿಗೆ ಜನತಾದಳ ಅಭಿಯಾನ’**, 50 ಲಕ್ಷ ಜನರ ಸದಸ್ಯತ್ವದ ಗುರಿಯೊಂದಿಗೆ, ರಾಜ್ಯದಲ್ಲಿ ಪಕ್ಷ ಸಂಘಟನೆಗಾಗಿ ಪ್ರವಾಸ ಆರಂಭಿಸಿದ್ದಾಗಿ, ಜೆ.ಡಿ.ಎಸ್. ಯುವ ಘಟಕದ ಅಧ್ಯಕ್ಷ, ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ. ಕೋಲಾರ ಜಿಲ್ಲೆ, ಮಾಲೂರಿನಲ್ಲಿ, ಅವರು ಮಾತನಾಡಿದರು.

<><><>

**ಕೊಪ್ಪಳ ಜಿಲ್ಲೆಯಲ್ಲಿ ಜರುಗಿದ,** ಲೋಕ ಅದಾಲತ್ ನಲ್ಲಿ ಒಟ್ಟು 6 ಸಾವಿರದ 502 ವಿವಿಧ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್.ದರಗದ ಹೇಳಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>